ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 19(60)

ಸದಸ್ಯರ ಹೆಸರು : ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 13-12-2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕರ್ನಾಟಕ ರಾಜ್ಯದಲ್ಲಿ ಕಳೆದ 4 ವರ್ಷಗಳಿಂದ ಪದವಿ ಪೂರ್ವ ಶಿಕ್ಷಣ ಇಲಾಖೆ ಅಡಿಯಲ್ಲಿ ಸರ್ಕಾರಿ/ಖಾಸಗಿ/ ಅನುದಾನಿತ/ಅನುದಾನ ರಹಿತ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;</td><td>ಮಾರ್ಚ್ 2017-18 ರಿಂದ ಮಾರ್ಚ್ 2020-21ರವರೆಗೆ ಸರ್ಕಾರಿ/ಖಾಸಗಿ/ಅನುದಾನಿತ/ಅನುದಾನ ರಹಿತ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡಿರುವ/ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ:15,86,775.</td></tr>
<tr><td>ಆ)</td><td>ಸರ್ಕಾರಿ/ಖಾಸಗಿ/ಅನುದಾನಿತ/ಅನುದಾನ ರಹಿತ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡಿ ಸಿಇಟಿ, ನೀಟ್, ಜೆ.ಇ.ಇ, ಐಐಟಿ, ಪರೀಕ್ಷೆಗಳಿಗೆ ಹಾಜರಾಗಿ ಸರ್ಕಾರಿ ಖೋಟಾದಡಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)</td><td>ಸರ್ಕಾರಿ/ಖಾಸಗಿ/ಅನುದಾನಿತ/ಅನುದಾನರಹಿತ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡಿ ಸಿಇಟಿ, ನೀಟ್, ಜೆ.ಇ.ಇ, ಐಐಟಿ, ಪರೀಕ್ಷೆಗಳಿಗೆ ಹಾಜರಾಗಿ ಸರ್ಕಾರಿ ಖೋಟಾದಡಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಈ ಕೆಳಕಂಡಂತಿದೆ-
<table>
<tr><th>ವರ್ಷ</th><th>ವೈದ್ಯಕೀಯ</th><th>ಇಂಜಿನಿಯರಿಂಗ್</th></tr>
<tr><td>2017-18</td><td>3668</td><td>47327</td></tr>
<tr><td>2018-19</td><td>3640</td><td>46554</td></tr>
<tr><td>2019-20</td><td>3926</td><td>38044</td></tr>
<tr><td>2020-21</td><td>4017</td><td>37292</td></tr>
</table></td></tr>
<tr><td>ಇ)</td><td>ಖಾಸಗಿ/ಅನುದಾನಿತ/ಅನುದಾನ ರಹಿತ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿಗಳು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗದಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ಪಡೆದಿದ್ದಾರೆ ಎಂಬ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ</td></tr>
</table>

ಈ)	ಸರ್ಕಾರಿ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಭವಿಷ್ಯದಲ್ಲಾದರೂ ಖಾಸಗಿ/ಅನುದಾನಿತ /ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ರೀತಿಯಲ್ಲಿ ತರಬೇತಿ ನೀಡಿ, ಸರ್ಕಾರಿ ಪದವಿ ಪೂರ್ವ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳನ್ನು ಸಿ.ಇ.ಟಿ, ನೀಟ್, ಜೆ.ಇ.ಇ, ಐಐಟಿ, ಈ ಪರೀಕ್ಷೆಗಳಲ್ಲಿ ಹೆಚ್ಚಿನ ಅಂಕಗಳನ್ನು ಪಡೆಯಲು ಅನುವಾಗುವಂತೆ ಅಗತ್ಯ ಕಾರ್ಯಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು?	ಸಾಮಾನ್ಯ ಪ್ರವೇಶ ಪರೀಕ್ಷೆ–2020 ಪರೀಕ್ಷೆಗಳಿಗೆ ಸಂಬಂಧಿಸಿದಂತೆ, (Comprehensive Online platform to prepare for KCET2020-Online video, synopsis and mock test Online Mock Test for NEET)ತರಬೇತಿಗಳನ್ನು ನೀಡಲು ಸರ್ಕಾರದ ಆದೇಶ ಸಂಖ್ಯೆ:ಇಡಿ 02 ಹೆಚ್‌ಪಿಟಿ 2020 ದಿನಾಂಕ:03–04–2020ರಂತೆ ಕೆ.ಇ.ಎ. ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಕಿಯೋನಿಕ್ಸ್ ಸಂಸ್ಥೆಯಿಂದ ತರಬೇತಿಯನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ.

ಸಂಖ್ಯೆ: ಇಡಿ 195 ಡಿಜಿಡಬ್ಲ್ಯೂ 2021

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಹಾಗೂ ಸಕಾಲ ಸಚಿವರು